## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತಪೋವನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ದಾವಣಗೆರೆ ಇವರಿಗೆ 2015-16ನೇ ಶೈಕ್ಷಣಿಕ ಸಾಲಿನಿಂದ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಭಾರತ ಸರ್ಕಾರದ ಆಯುಷ್ ಇಲಾಖೆಯ ಪತ್ರ ಸಂಖ್ಯೆ: R-12011/16/2014-EP(IM-1), ದಿನಾಂಕ:19.03.2015.
2. ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರಸಂಖ್ಯೆ:ಆಯುಷ್/66/ಅಭಿವೃದ್ಧಿ(3)/2015-16, ದಿ:26.08.2015.

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಭಾರತ ಸರ್ಕಾರದ ಆಯುಷ್ ಇಲಾಖೆಯ ಪತ್ರದಲ್ಲಿ ತಪೋವನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ದಾವಣಗೆರೆ ಇವರಿಗೆ 2015–16ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಹೊಸದಾಗಿ ಪ್ರಾರಂಭಿಸಲು ಕೆಲವೊಂದು ಷರತ್ತುಗಳಿಗೊಳಪಟ್ಟು ಅನುಮತಿಯನ್ನು ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರು ತಪೋವನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ದಾವಣಗೆರೆ ಇವರಿಗೆ 2015–16ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಬಿ.ಎ.ಎಂ.ಎಸ್.ಪದವಿ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ರಾಜ್ಯ ಸರ್ಕಾರವು ನೀಡಿರುವ ನಿರಾಕ್ಷೇಪಣಾ ಪತ್ರದ ಆಧಾರದ ಮೇಲೆ ಕೇಂದ್ರ ಸರ್ಕಾರವು ಕೆಲವೊಂದು ಷರತ್ತುಗಳಿಗೊಳಪಟ್ಟು ಅನುಮತಿ ನೀಡಿದೆ ಹಾಗೂ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಕೂಡ Consent of Affiliation ನೀಡಿದೆಯೆಂದು ತಿಳಿಸುತ್ತಾ, ಸದರಿ ಅನುಮತಿ ಪ್ರಮಾಣ ಪತ್ರಗಳ ಆಧಾರದ ಮೇಲೆ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 198 ಪಿಟಿಡಿ 2015, ಬೆಂಗಳೂರು, ದಿನಾಂಕ:11.09.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ತಪೋವನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ದಾವಣಗೆರೆ ಇವರಿಗೆ 2015–16ನೇ ಶೈಕ್ಷಣಿಕ ಸಾಲಿನಿಂದ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಬಿ.ಎ.ಎಂ.ಎಸ್. ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿದೆ.

1. ಸರ್ಕಾರಿ ಸೀಟುಗಳ ಹಂಚಿಕೆ ಮತ್ತು ಶುಲ್ಕಗಳ ಬಗ್ಗೆ ಹಾಲಿ ಜಾರಿಯಲ್ಲಿರುವ ಎಲ್ಲಾ ನಿಯಮಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
2. ಸಂಯೋಜನೆಯ ಬಗ್ಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮತಿ ಪಡೆಯತಕ್ಕದ್ದು.
3. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ವಿಧಿಸುವ ಷರತ್ತುಗಳನ್ನು ಪೂರೈಸತಕ್ಕದ್ದು.

..2

Principal
Tapovana Ayurvedic Medical
College & Hospital
Doddabathi-577566. Davangere

4. ಸದರಿ ಕೋರ್ಸಿಗೆ ಸಂಬಂಧಿಸಿದಂತೆ ಕಾಲೇಜಿಗೆ ರಾಜ್ಯ ಸರ್ಕಾರದಿಂದ ಯಾವುದೇ ಅನುದಾನ ಹಾಗೂ ಸೌಲಭ್ಯ ನೀಡಲಾಗುವುದಿಲ್ಲ.
5. ಅನುಮೋದಿತ ಪದವಿ ಕೋರ್ಸ್‌ನ ಸೀಟುಗಳಲ್ಲಿ ಶೇಕಡ 20ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಬಿಟ್ಟುಕೊಡತಕ್ಕದ್ದು.
6. ಶುಲ್ಕ ವಿಧಿಸುವ ಬಗ್ಗೆ ಸರ್ಕಾರವು ವಿಧಿಸಿರುವ/ವಿಧಿಸಬಹುದಾದ ಷರತ್ತುಗಳು/ನಿಯಮಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
7. ಕೇಂದ್ರ ಸರ್ಕಾರ/ರಾಜ್ಯ ಸರ್ಕಾರ ವಿಧಿಸಿರುವ ಹಾಗೂ ವಿಧಿಸಬಹುದಾದ ಎಲ್ಲಾ ಷರತ್ತುಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
8. ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಲಗ್ನತೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾ.ವೈ. ಪ ಮತ್ತು ಸಮನ್ವಯ)
(ದೂರವಾಣಿ ಸಂಖ್ಯೆ:22034292)

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ)/(ಜಿ&ಆರ್.ಎಸ್.ಎ) ಕರ್ನಾಟಕ ಹೊಸಕಟ್ಟಡ, "ಆಡಿಟ್ ಭವನ" ಅಂಚೆಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು–01.
2. ಪ್ರಧಾನ ಮಹಾಲೇಖಪಾಲರು (ಎ&ಇ) ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು–01.
3. ಕುಲಪತಿಗಳು/ರಿಜಿಸ್ಟ್ರಾರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, ಬೆಂಗಳೂರು.
4. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
5. ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಧನ್ವಂತರಿ ರಸ್ತೆ, ಬೆಂಗಳೂರು–9.
6. ಕಾರ್ಯದರ್ಶಿ, ಶ್ರೀ ಶಕ್ತಿ ಅಸೋಸಿಯೇಷನ್, ತಪೋವನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಗುಟ್ಟರ್ ಕಾಲೋನಿ, ಹರಿಹರ–577 601, ದಾವಣಗೆರೆ.
7. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
9. ಸರ್ಕಾರದ ಉಪ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

Principal
Tapovana Ayurvedic Medical
College & Hospital
Doddabathi-577566. Davangere